**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:- 6ನೇ ರಾಜ್ಯ ವೇತನ ಆಯೋಗಕ್ಕೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.**

ಓದಲಾಗಿದೆ: 1. ದಿನಾಂಕ: 01-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.
2. ದಿನಾಂಕ: 29-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 33 ಎಸ್‌ಆರ್‌ಪಿ 2017 (ಭಾ).

**ಪ್ರಸ್ತಾವನೆ:**

ಈ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 01-06-2017ರ ಆದೇಶದನ್ವಯ ರಚಿಸಲಾದ 6ನೇ ರಾಜ್ಯ ವೇತನ ಆಯೋಗಕ್ಕೆ ಕ್ರಮ ಸಂಖ್ಯೆ (2)ರ ದಿನಾಂಕ: 29-06-2017ರ ಆದೇಶದನ್ವಯ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ.

2017-18ನೇ ಸಾಲಿನ ಮೊದಲನೇ ಕಂತಿನ ಪೂರಕ ಅಂದಾಜಿನಲ್ಲಿ 6ನೇ ರಾಜ್ಯ ವೇತನ ಆಯೋಗದ ಲೆಕ್ಕ ಶೀರ್ಷಿಕೆ **"2025-00-092-0-07-ಕರ್ನಾಟಕ ವೇತನ ಆಯೋಗ"** ಗೆ ರೂ.407 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ಈ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಲು ಪ್ರಸ್ತಾಪಿಸಲಾಗಿದ್ದು ಸರ್ಕಾರವು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 33 ಎಸ್‌ಆರ್‌ಪಿ 2017 (ಭಾ),**
**ಬೆಂಗಳೂರು, ದಿನಾಂಕ 6ನೇ ಜುಲೈ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಮೊದಲನೇ ಕಂತಿನ ಪೂರಕ ಅಂದಾಜಿನಲ್ಲಿ 6ನೇ ರಾಜ್ಯ ವೇತನ ಆಯೋಗದ ಲೆಕ್ಕ ಶೀರ್ಷಿಕೆ **"2025-00-092-0-07-ಕರ್ನಾಟಕ ವೇತನ ಆಯೋಗ"** ಗೆ ಒದಗಿಸಲಾಗಿರುವ ರೂ.407 ಲಕ್ಷಗಳ ಅನುದಾನವನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಲಾಗಿದೆ.

1) ಬಿಡುಗಡೆ ಮಾಡಲಾದ ಅನುದಾನವನ್ನು ಗ್ರಾಂಟ್ ಇನ್ ಏಡ್ ಬಿಲ್ ಮೂಲಕ ಡ್ರಾ ಮಾಡಿ, ಈ ಸಂಬಂಧ ಒಂದು ಬ್ಯಾಂಕ್ ಖಾತೆ ತೆರೆದು ಅದರಲ್ಲಿ ಠೇವಣಿ ಇಟ್ಟು ಬಳಕೆ ಮಾಡತಕ್ಕದ್ದು.

2) ಈ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 29-06-2017ರ ಆದೇಶದಲ್ಲಿ ತಿಳಿಸಿರುವಂತೆ, 6ನೇ ರಾಜ್ಯ ವೇತನ ಆಯೋಗಕ್ಕೆ ಮೀಸಲಿಟ್ಟ ಹಣವನ್ನು ಆಯೋಗದ ಉಪ ಕಾರ್ಯದರ್ಶಿ ಇವರು ಹಣ ತೆಗೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

06.07.17

(ಯು.ಹೆಚ್.ನಾರಾಯಣಸ್ವಾಮಿ)
ಸರ್ಕಾರದ ಉಪ ಕಾರ್ಯದರ್ಶಿ,
(ಆಡಳಿತ ಮತ್ತು ಸಮನ್ವಯ)
ಆರ್ಥಿಕ ಇಲಾಖೆ.

BHR 6/7/17

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ,(ಪಿ.ಬಿ. ನಂ.5329) ಬೆಂಗಳೂರು.
4. ಅಧ್ಯಕ್ಷರು / ಸದಸ್ಯರುಗಳು, 6ನೇ ರಾಜ್ಯ ವೇತನ ಆಯೋಗ, ಬೆಂಗಳೂರು
5. ಕಾರ್ಯದರ್ಶಿ, 6ನೇ ರಾಜ್ಯ ವೇತನ ಆಯೋಗ, ಬೆಂಗಳೂರು
6. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಟವರ್, ಪೋಡಿಯಂ ಬ್ಲಾಕ್, ಅಂಬೇಡ್ಕರ್ ವೀಧಿ, ಬೆಂಗಳೂರು.
7. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
8. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇಲಾಖೆ (ಸೇವೆಗಳು)/(ಸಿಬ್ಬಂದಿ)/(ಆಡಳಿತ)/(ಲೆಕ್ಕಪತ್ರ)/ ಕಾರ್ಯಕಾರಿ
10. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
11. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**